# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 444 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 15.09.2022 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರ ಹೊಸ ಪಿಂಚಣಿ ವ್ಯವಸ್ಥೆಯನ್ನು (N.P.S) ರದ್ದುಗೊಳಿಸಿ, ಹಳೆ ಪಿಂಚಣಿ ವ್ಯವಸ್ಥೆಯನ್ನು (O.P.S) ಜಾರಿಗೊಳಿಸುವ ಬೇಡಿಕೆ ಕುರಿತು ಸರ್ಕಾರದ ನಿಲುವೇನು; | ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.<br><br>ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |
| ಆ) | ಹೊಸ ಪಿಂಚಣಿ ವ್ಯವಸ್ಥೆಯನ್ನು (N.P.S) ಸರ್ಕಾರ ರದ್ದುಗೊಳಿಸಿ ಹಳೆ ಪಿಂಚಣಿ ವ್ಯವಸ್ಥೆಯನ್ನು (O.P.S) ಜಾರಿಗೊಳಿಸುವುದೇ; | |

| | | |
|---|---|---|
| ಇ) | ಈ ಹೊಸ ಪಿಂಚಣಿ (N.P.S) ವ್ಯವಸ್ಥೆಯಡಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಈ ನೌಕರರನ್ನು ಹಳೆ ಪಿಂಚಣಿ (O.P.S) ವ್ಯವಸ್ಥೆಯಡಿ ತಂದು ಜಾರಿಗೊಳಿಸಿದರೆ ತಗುಲಬಹುದಾದ ಅಂದಾಜು ವೆಚ್ಚ ಎಷ್ಟು? (ವಿವರವನ್ನು ಒದಗಿಸುವುದು) | ದಿನಾಂಕ: 16.08.2022 ಕ್ಕೆ ಇದ್ದಂತೆ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಟ್ಟ ನೌಕರರ ಸಂಖ್ಯೆ: 2,57,349.<br><br>ದಿನಾಂಕ: 01.04.2006 ರ ನಂತರ ರಾಜ್ಯ ಸರ್ಕಾರದ ಸೇವೆಗೆ ಸೇರಿರುವ ನೌಕರರನ್ನು ಹಳೆ ಪಿಂಚಣಿ ಯೋಜನೆಗೆ ಪರಿವರ್ತಿಸುವುದರ ಆರ್ಥಿಕ ಪರಿಣಾಮದ ಬಗ್ಗೆ ಮಾಹಿತಿಯನ್ನು ಅನೇಕ ಮೂಲಗಳಿಂದ ಸಂಗ್ರಹಿಸಬೇಕಾಗಿದೆ ಮತ್ತು ಆರ್ಥಿಕ ಹೊರೆಯನ್ನು ಅಂದಾಜಿಸಲು ಸಂಕೀರ್ಣ ಗಣಿತ ಲೆಕ್ಕಚಾರದ ಅಗತ್ಯವಿರುತ್ತದೆ. ಆದ್ದರಿಂದ ವೆಚ್ಚವನ್ನು ಅಂದಾಜಿಸಲಾಗುತ್ತಿಲ್ಲ. |

ಆಇ-ಪಿಇಎನ್/238/2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ